ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 03 ನೇ ಮಾರ್ಚ್, 2020

2017-2018ನೇ ಸಾಲಿನ ನಗರ ವಾಜಪೇಯಿ ಯೋಜನೆಯಲ್ಲಿ ಫಲಾನುಭವಿಗಳ ಆಯ್ಕೆ ಕುರಿತು

ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

023 (197) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2017-2018ನೇ ಸಾಲಿನಲ್ಲಿ ನಗರ ವಾಜಪೇಯಿ ನಿವೇಶನ ಯೋಜನೆಯಡಿ ಹಾನಗಲ್ ನಗರದ ಪುರಸಭೆ ವ್ಯಾಪ್ತಿಯ ಸರ್ವೆ ನಂ:649ರಲ್ಲಿ ರಚಿಸಿದ 138 ನಿವೇಶನಗಳನ್ನು ಆಶ್ರಯ ಸಮಿತಿಯಲ್ಲಿ ಸರ್ಕಾರದ ಮಾರ್ಗಸೂಚಿಯಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸುಮಾರು 33 ಫಲಾನುಭವಿಗಳಿಗೆ ಹಾಗೂ ಇತರೆ ಜಾತಿಯ 105 ಫಲಾನುಭವಿಗಳಿಗೆ ಆಯ್ಕೆ ಮಾಡಿದ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರದ ಮಾರ್ಗಸೂಚಿಯ ಅನ್ವಯ ಆಯ್ಕೆಗೊಂಡಂತಹ ಫಲಾನುಭವಿಗಳಿಗೆ ಪಟ್ಟಾ ಹಾಗೂ ನಿವೇಶನವನ್ನು ನೀಡಲಾಗಿದೆಯೇ ;

(ಇ) ಪಟ್ಟಾ ಹಾಗೂ ನಿವೇಶನ ನೀಡುವಲ್ಲಿ ವಿಳಂಬಕ್ಕೆ ಕಾರಣಗಳೇನು ;

(ಈ) ಫಲಾನುಭವಿಗಳಿಗೆ ಪಟ್ಟಾ ಹಾಗೂ ನಿವೇಶನ ನೀಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ; ಹಾಗೂ ಯಾವ ಕಾಲಮಿತಿಯೊಳಗೆ ಪಟ್ಟಾ ಹಾಗೂ ನಿವೇಶನ ನೀಡಲಾಗುವುದು ? (ಮಾಹಿತಿಯನ್ನು ಒದಗಿಸುವುದು)